KARNATAK UNIVERSITY, DHARWAD
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Examination G.A.D. Section
ಪರೀಕ್ಷಾ ಸಾಮಾನ್ಯ ಆಡಳಿತ ವಿಭಾಗ
"NAAC Accredited with "A" Grade 2022"

Pavate Nagar, Dharwad
ಪಾವಟೆನಗರ, ಧಾರವಾಡ

Tel Ph No. 0836-2215267
Website : www.kud.ac.in

ನಂ:/ಕವಿವಿ/ಪರೀಕ್ಷಾ/ಜಿಎಡಿ/2025/705

ದಿನಾಂಕ:10/12/2025

## ಸುತ್ತೋಲೆ

**ವಿಷಯ**: ಜನೇವರಿ 2026 ರಲ್ಲಿ ಜರಗುವ ಸ್ನಾತಕ NEP ಹಾಗೂ Revised NEP ಪದವಿಯ 1, 3, 5 ಮತ್ತು 7 ನೇ ಸೆಮಿಸ್ಟರ್‌ನ (ರೆಗ್ಯೂಲರ್/ರಿಪೀಟರ್) ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿ/ಶುಲ್ಕ ತುಂಬಲು ಅವಧಿ ವಿಸ್ತರಿಸಿದ ಕುರಿತು.

**ಉಲ್ಲೇಖ**: 1) ಅಧಿಸೂಚನೆಗಳ ನಂ:/ಕವಿವಿ/ಪರೀಕ್ಷಾ/ಜಿಎಡಿ/2025/644, 645 & 646 ದಿನಾಂಕ:26/11/2025
2) ಸುತ್ತೋಲೆ. ಸಂಖ್ಯೆ/ ಕವಿವಿ/ಪರೀಕ್ಷಾ/ಜಿಎಡಿ/2025/681, ದಿನಾಂಕ:08/12/2025

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಜನೇವರಿ 2026 ರಲ್ಲಿ ಜರುಗುವ ಎಲ್ಲ ಸ್ನಾತಕ NEP ಹಾಗೂ Revised NEP ಪದವಿಗಳ 1, 3, 5 ಮತ್ತು 7 ನೇ ಸೆಮಿಸ್ಟರ್‌ನ ರೆಗ್ಯೂಲರ್/ರಿಪೀಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, ಪರೀಕ್ಷಾ ಅರ್ಜಿ/ಶುಲ್ಕ ತುಂಬಲು ನಿಗದಿಪಡಿಸಿದ ಕೊನೆಯ **ದಿನಾಂಕ:08/12/2025** ರ ನಂತರ ಅರ್ಜಿ ತುಂಬದೆ ಇರುವಂತಹ ವಿದ್ಯಾರ್ಥಿಗಳಿಗೆ ಪರೀಕ್ಷಾ ಅರ್ಜಿ ತುಂಬಲು **ದಿನಾಂಕ:09/12/2025** ರಂದು ಒಂದು ದಿನ ಅವಕಾಶ ಕಲ್ಪಿಸಲಾಗಿತ್ತು. ಆದಾಗ್ಯೂ ಪರೀಕ್ಷಾ ಅರ್ಜಿ ತುಂಬದೆ ಇರುವಂತಹ ವಿದ್ಯಾರ್ಥಿಗಳು ಬಹುಸಂಖ್ಯೆಯಲ್ಲಿ ವಿಶ್ವವಿದ್ಯಾಲಯಕ್ಕೆ ಪರೀಕ್ಷಾ ಅರ್ಜಿ ತುಂಬಲು ಬರುತ್ತಿರುವರು ಈ ಹಿನ್ನಲೆಯಲ್ಲಿ ಪರೀಕ್ಷಾ ಅರ್ಜಿ /ಶುಲ್ಕ ತುಂಬದೆ ಇರುವಂತಹ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ **ಪರೀಕ್ಷಾ ವಿಭಾಗದಲ್ಲಿ ತಿಳಿಸುವ ದಂಡದೊಂದಿಗೆ SBI Collect** ಮುಖಾಂತರ ಪರೀಕ್ಷಾ ಶುಲ್ಕವನ್ನು ಸಂದಾಯ ಮಾಡಲು ಹಾಗೂ ಖುದ್ದಾಗಿ **Manual** ಪರೀಕ್ಷಾ ಅರ್ಜಿಯನ್ನು ತುಂಬಲು ಕೊನೆಯದಾಗಿ **ದಿನಾಂಕ:10/12/2025 ಮತ್ತು 11/12/2025** ರಂದು ಎರಡು ದಿನಗಳವರೆಗೆ ಅವಧಿ ವಿಸ್ತರಿಸಿ ಅವಕಾಶ ನೀಡಲಾಗಿದೆ.

ಮುಂದುವರೆದು, ದಿನಾಂಕ:15/12/2025 ರಿಂದ ಪ್ರಾಯೋಗಿಕ ಪರೀಕ್ಷೆಗಳು ಪ್ರಾರಂಭವಾಗುವದರಿಂದ ಮೇಲ್ಕಂಡ ದಿನಾಂಕಗಳ ನಂತರ ಮಹಾವಿದ್ಯಾಲಯದವರು ಯಾವುದೇ ವಿದ್ಯಾರ್ಥಿಗಳನ್ನು ವಿಶ್ವವಿದ್ಯಾಲಯಕ್ಕೆ ಪರೀಕ್ಷಾ ಅರ್ಜಿ ತುಂಬಲು ಕಳುಹಿಸತಕ್ಕದ್ದಲ್ಲ. ಹಾಗೂ ಯಾವುದೇ ತರಹದ ಪರೀಕ್ಷಾ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸದರ ವಿಷಯವನ್ನು ಎಲ್ಲ ವಿದ್ಯಾರ್ಥಿಗಳ ಗಮನಕ್ಕೆ ತಂದು ಅದರಂತೆ ಪರೀಕ್ಷಾ ಅರ್ಜಿ/ಶುಲ್ಕಗಳನ್ನು ತುಂಬಲು ತಿಳಿಸಲಾಗಿದೆ.

10/12

ಕುಲಸಚಿವರು(ಮೌಲ್ಯಮಾಪನ)

ಗೆ,

ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು.

**ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:**

1) ಸಿಸ್ಟಮ್ ಎನಾಲಿಸ್ಟ್, ಗಣಕಯಂತ್ರ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2) ನಿರ್ದೇಶಕರು ಮಾಹಿತಿ ತಂತ್ರಜ್ಞಾನ ವಿಭಾಗ ಕ.ವಿ.ವಿ. ಧಾರವಾಡ. (ಅಂತರ್ಜಾಲದಲ್ಲಿ ಪ್ರಕಟಿಸುವುದು)
3) ಕುಲಪತಿಗಳ, ಕುಲಸಚಿವರ, ಕುಲಸಚಿವರು(ಮೌಲ್ಯಮಾಪನ), ವಿತ್ತಾಧಿಕಾರಿಗಳು ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ ಧಾರವಾಡ.
4) ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
5) ಎಲ್ಲ ಅಧೀಕ್ಷಕರುಗಳಿಗೆ, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.